ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 248 ಯುಬಿವಿ 2026

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 09.07.2026

ಇಂದ:

ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬಹುಮಹಡಿಗಳ ಕಟ್ಟಡ
ಡಾ. ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು

ಇವರಿಗೆ:

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ, ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಡಾನ್ ಬಾಸ್ಕೋ ಇನ್ಸಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅಂಡ್ ಕಂಪ್ಯೂಟರ್ ಅಪ್ಲಿಕೇಷನ್ಸ್, ಬೆಂಗಳೂರು ಇಲ್ಲಿ 2026-27 ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆ ನವೀಕರಣಕ್ಕೆ ಸಂಯೋಜನೆ ನೀಡುವ ಕುರಿತು.

ಉಲ್ಲೇಖ:-

1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021, 16.02.2021
2. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 384 ಯುಎನ್ಇ 2020, ದಿನಾಂಕ 18.02.2022
3. ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ2/IIAM/2026-27, ದಿ:07.04.2026 (AFF/215/AF/P20GCQ0061/2026-27/17565)

*****

ಬೆಂಗಳೂರು ವಿಶ್ವವಿದ್ಯಾಲಯದ ಡಾನ್ ಬಾಸ್ಕೋ ಇನ್ಸಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅಂಡ್ ಕಂಪ್ಯೂಟರ್ ಅಪ್ಲಿಕೇಷನ್ಸ್, ನಂ.8/7, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು ಇಲ್ಲಿ 2026-27ನೇ ಸಾಲಿನಿಂದ ಬಿ.ಬಿ.ಎ, ಬಿ.ಕಾಂ ಮತ್ತು ಬಿ.ಸಿ.ಎ ಕೋರ್ಸುಗಳಿಗೆ ಶಾಶ್ವತ ಸಂಯೋಜನೆಯನ್ನು ನವೀಕರಿಸುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಜೊತೆಯಲ್ಲಿ ಓದಲಾದ ಪ್ರಕರಣ 62(3)ರಡಿ ಅಗತ್ಯವಾಗುವ ಶಿಫಾರಸ್ಸನ್ನು ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ, ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಉಲ್ಲೇಖ(3)ರ ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ

ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರಿಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು, ಷರತ್ತುಗಳಿಗೆ ಒಳಪಟ್ಟು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ತತ್ಪರಿಣಾಮವಾಗಿ, ಡಾನ್ ಬಾಸ್ಕೋ ಇನ್ಸಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅಂಡ್ ಕಂಪ್ಯೂಟರ್ ಅಪ್ಲಿಕೇಷನ್ಸ್, ನಂ.8/7, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು ಇಲ್ಲಿ 2026-27ನೇ ಸಾಲಿನಿಂದ ಬಿ.ಬಿ.ಎ, ಬಿ.ಕಾಂ ಮತ್ತು ಬಿ.ಸಿ.ಎ ಕೋರ್ಸುಗಳಿಗೆ ಶಾಶ್ವತ ಸಂಯೋಜನೆಯನ್ನು ಈ ಕೆಳಕಂಡ ವಿದ್ಯಾರ್ಥಿ ಪ್ರಮಾಣಕ್ಕೆ ಅನ್ವಯಿಸುವಂತೆ 2026-27ನೇ ಶೈಕ್ಷಣಿಕ ಸಾಲಿನಿಂದ ನವೀಕರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಜೊತೆಯಲ್ಲಿ ಓದಲಾದ ಪ್ರಕರಣ 62(3)ರಡಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

**ಶಾಶ್ವತ ಸಂಯೋಜನೆ ನವೀಕರಣ:-**

| ಕ್ರ.ಸಂ | ಕೋರ್ಸು | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಬಿ.ಬಿ.ಎ | General | 60 |
| 2 | ಬಿ.ಕಾಂ | General | 100 |
| 3 | ಬಿ.ಸಿ.ಎ | Computer Applications | 120 |

ಕಟ್ಟಡ ಸುರಕ್ಷತೆ/ಸಂರಚನೆ ಸ್ಥಿರತೆ ಪ್ರಮಾಣ ಪತ್ರವನ್ನು 06 ತಿಂಗಳುಗಳ ಒಳಗಾಗಿ ಲೋಕೋಪಯೋಗಿ ಇಲಾಖೆಯಿಂದ ಪಡೆಯತಕ್ಕದ್ದು. ಯುಜಿಸಿ ವಿನಿಯಮಗಳನ್ವಯ ಅಗತ್ಯವಾಗುವ ಮುಚ್ಚಳಿಕೆ ಕಾರ್ಯಗತಗೊಳಿಸುವಿಕೆ ನಿಯತಾಂಕ ಹಾಗೂ ಪ್ರತಿ ವಿದ್ಯಾರ್ಥಿ ತಲಾವಾರು ಪ್ರಯೋಗಾಲಯ ಲಭ್ಯತೆ ನಿಯತಾಂಕವನ್ನು 06 ತಿಂಗಳುಗಳ ಒಳಗಾಗಿ ಪೂರೈಸತಕ್ಕದ್ದು.

06 ತಿಂಗಳುಗಳ ಒಳಗಾಗಿ ವಿಕಲಚೇತನರ ಸೌಲಭ್ಯಗಳನ್ನು ಕಲ್ಪಿಸತಕ್ಕದ್ದು. ಅನುಭವಿ ಬೋಧಕರನ್ನು ಹೆಚ್ಚುವರಿಯಾಗಿ ನೇಮಿಸಿಕೊಳ್ಳತಕ್ಕದ್ದು. ಹಿಂದಿನ ಸ್ಥಳೀಯ ವಿಚಾರಣೆ ಸಮಿತಿಯ ವರದಿಯಲ್ಲಿನ ಷರತ್ತುಗಳನ್ನು 03 ತಿಂಗಳ ಒಳಗಾಗಿ ಪೂರೈಸತಕ್ಕದ್ದು. ಸ್ಥಳೀಯ ವಿಚಾರಣೆ ಸಮಿತಿಯ ಎಲ್ಲಾ ಷರತ್ತುಗಳನ್ನು 03 ತಿಂಗಳ ಒಳಗಾಗಿ ಪೂರೈಸತಕ್ಕದ್ದು.

ಶಾಶ್ವತ ಸಂಯೋಜನೆ ನವೀಕರಣಕ್ಕೆ ಅಗತ್ಯವಾಗುವ ಈ ಕೆಳಕಂಡ ಷರತ್ತುಗಳನ್ನು ಪೂರೈಸತಕ್ಕದ್ದು.

1. ಸಮಗ್ರ ಶೈಕ್ಷಣಿಕ ಹಾಗೂ ಭೌತಿಕ ಮೂಲಸೌಕರ್ಯಗಳನ್ನು ಕಲ್ಪಿಸತಕ್ಕದ್ದು;
2. ಖಾಯಂ ಬೋಧಕ ಸಿಬ್ಬಂದಿಗೆ ಯುಜಿಸಿ ವೇತನಶ್ರೇಣಿಯಲ್ಲಿ ಹಾಗೂ ಬೋಧಕೇತರ ಸಿಬ್ಬಂದಿಗೆ ರಾಜ್ಯ ವೇತನ ಶ್ರೇಣಿಯಲ್ಲಿ ವೇತನ ಪಾವತಿಸತಕ್ಕದ್ದು;

3. ಕಾಲೇಜು  ಕೌನ್ಸಿಲ್ ಅನ್ನು ಸ್ಥಾಪಿಸಲಾಗದಿದ್ದಲ್ಲಿ,ಕೂಡಲೇ ಸ್ಥಾಪಿಸಿ, ನಿಯತಕಾಲಿಕವಾಗಿ ಸಭೆಗಳನ್ನು ನಡೆಸತಕ್ಕದ್ದು

ಡಾನ್ ಬಾಸ್ಕೋ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅಂಡ್ ಕಂಪ್ಯೂಟರ್ ಅಪ್ಲಿಕೇಷನ್ಸ್, ನಂ.8/7, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು ಇಲ್ಲಿ 2026-27ನೇ ಸಾಲಿನಿಂದ ಬಿ.ಬಿ.ಎ, ಬಿ.ಕಾಂ ಮತ್ತು ಬಿ.ಸಿ.ಎ ಕೋರ್ಸುಗಳಿಗೆ ಶಾಶ್ವತ ಸಂಯೋಜನೆ ನವೀಕರಣವನ್ನು ಮಂಜೂರು ಮಾಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ

ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13 ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 62 ರಲ್ಲಿನ ಮಾನದಂಡಗಳು ಹಾಗೂ ಶಾಶ್ವತ ಸಂಯೋಜನೆ ನವೀಕರಣಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಸಂಬಂಧಿಸಿದ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ತಮ್ಮ ನಂಬುಗೆಯ,

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯಗಳು-2)

ಪ್ರತಿ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಪ್ರಾಂಶುಪಾಲರು, ಡಾನ್ ಬಾಸ್ಕೋ ಇನ್ಸಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಅಂಡ್ ಕಂಪ್ಯೂಟರ್ ಅಪ್ಲಿಕೇಷನ್ಸ್, ನಂ.8/7, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು.
5. ಇ- ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ (ಜಾಲತಾಣದಲ್ಲಿ ಪ್ರಚುರಪಡಿಸುವುದು).